ಎರಡನೇ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ
ಬೆಂಗಳೂರು ಗ್ರಾಮಾಂತರ ಜಿಲ್ಲೆ, ಬೆಂಗಳೂರು

ಸ್ಪೆಷಲ್ ಕೇಸ್ ನಂಃ 92/2017

(ಫ್ರಾಸಾ-14 ಚಾಸಾ-27)
ಸಾಕ್ಷಿಗೆ ಪ್ರಮಾಣ ವಚನ ಭೋದಿಸಲಾಯಿತು
ದಿಃ 09.07.2025

| | | |
|---|---|---|
| ಸಾಕ್ಷಿದಾರರ ಹೆಸರು | - | ನಾಗರಾಜು |
| ತಂದೆಯ ಹೆಸರು | - | ಚಂದ್ರಪ್ಪ |
| ವಯಸ್ಸು | - | 36 ವರ್ಷ, |
| ಉದ್ಯೋಗ | - | ನರ್ಸರಿ |
| ವಾಸ | - | ಆನೇಕಲ್ |

ಮುಖ್ಯ ವಿಚಾರಣೆಃ ಮಾನ್ಯ ವಿಶೇಷ ಸರ್ಕಾರಿ ಅಭಿಯೋಜಕರಿಂದಃ

ಈಗ ನಾನು ಒಂದು ದಾಖಲೆ ನೋಡುತ್ತಿದ್ದು ಸದರಿ ದಾಖಲೆಯಲ್ಲಿ ನನ್ನ ಸಹಿ ಇರುತ್ತದೆ. ಸದರಿ ದಾಖಲೆ ಜಪ್ತಿ ಪಂಚನಾಮೆ ಇದ್ದು ಅದನ್ನು ನಿಶಾನೆ ಪಿ-17 ಎಂದು ಹಾಗೂ ಅದರಲ್ಲಿರುವ ಸಾಕ್ಷಿ ಸಹಿಯನ್ನು ನಿಶಾನೆ ಪಿ-17(ಎ) ಎಂದು ಗುರುತಿಸಲಾಯಿತು. ಈಗ ಏಳು ವರ್ಷಗಳ ಹಿಂದೆ ನಾನು ನಿಪಿ-17 ಕ್ಕೆ ಠಾಣೆಯಲ್ಲಿ ಸಹಿ ಮಾಡಿರುತ್ತೇನೆ. ನಿಶಾನೆ ಪಿ-17 ರಲ್ಲಿ ಬರೆದಿರುವ ವಿಚಾರಗಳು ನನಗೆ ಗೊತ್ತಿಲ್ಲ. ಪೋಲಿಸರು ನನ್ನ ಸಮಕ್ಷಮ ಯಾವುದೇ ವಸ್ತುಗಳನ್ನು ಅಮಾನತುಪಡಿಸಿಕೊಂಡಿಲ್ಲ. ನನ್ನ ಜೊತೆ ಬೇರೆ ಯಾರು ಸಹಿ ಮಾಡಿರುವುದಿಲ್ಲ. ನಾನು ಪೋಲಿಸರಿಗೆ ಯಾವುದೇ ಹೇಳಿಕೆ ನೀಡಿರುವುದಿಲ್ಲ.

(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯಾಗಿ ಪರಿಗಣಿಸಿ ಪಾಟೀ ಸವಾಲು ಮಾಡಲು ಮಾನ್ಯ ಎಸ್ ಪಿಪಿ ರವರು ವಿನಂತಿಸಿದ್ದರಿಂದ ಸಾಕ್ಷಿಯ ಪಂಚನಾಮೆ ಹಾಗೂ ಇತರೆ ನ್ಯಾಯಾಲಯದ ದಾಖಲಾತಿಗಳನ್ನು ಪರಿಶೀಲಿಸಿ ಅನುಮತಿ ನೀಡಲಾಯಿತು.)

ಪಾಟೀ ಸವಾಲುಃ ಮಾನ್ಯ ವಿಶೇಷ ಸರ್ಕಾರಿ ಅಭಿಯೋಜಕರಿಂದಃ

2. ದಿಃ15.01.2017 ರಂದು ಪೋಲಿಸರು 1 ನೇ ಆರೋಪಿ ತೋರಿಸಿದ ಕೃತ್ಯ ನಡೆದ ಸ್ಥಳವಾದ ಸೋಲೂರು ಗ್ರಾಮದ ಗುಡ್ಡಪ್ಪನ ನೀಲಗಿರಿ ತೋಪಿನಲ್ಲಿ ವಾಹನ ಸಂಖ್ಯೆ ಕೆಎ-02-ಇಎಸ್ 8007 ಅನ್ನು ಕೃತ್ಯಕ್ಕೆ ಬಳಸಿರುವುದಾಗಿ ಹೇಳಿ ತೋರಿಸಿದ ಮೇರೆಗೆ ಅಮಾನತುಪಡಿಸಿಕೊಂಡು ನನ್ನ ಹಾಗೂ ಚಾಸಾ-28 ರವರ ಸಮಕ್ಷಮ ಬೆಳಗ್ಗೆ 11 ರಿಂದ 12 ಘಂಟೆಗೆ ಅಮಾನತು ಪಂಚನಾಮೆ ಕ್ರಮ ಜರುಗಿಸಿ ವಾಹನ ಜಪ್ತಿಪಡಿಸಿಕೊಂಡು ಅದರಲ್ಲಿ ಬರೆದಿರುವ ವಿಷಯಗಳನ್ನು ನಮಗೆ ಓದಿ ಹೇಳಿದಾಗ ನಾವು ಅದರಲ್ಲಿ ಬರೆದಿರುವುದನ್ನು ತಿಳಿದುಕೊಂಡು ಸಹಿ ಮಾಡಿರುತ್ತೇನೆ ಎಂದರೆ ಸರಿಯಲ್ಲ. ನಿಶಾನೆ ಪಿ-17 ರಂತೆ ನನ್ನ ಸಮಕ್ಷಮ ಪಂಚನಾಮೆ ಜರುಗಿಸಿದ್ದರೂ ಸಹ ಆರೋಪಿತರ ಮಾತು ಕೇಳಿಕೊಂಡು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ಈಗ ಓದಿ ಹೇಳಿದಂತೆ "ದಿಃ15.01.2017 ರಂದು ಬೆಳಗ್ಗೆ 10.30 ಘಂಟೆ ಸಮಯದಲ್ಲಿ ------------ ಅಸಾಮಿಯನ್ನು ಮತ್ತೆ ನೋಡಿದರೆ ಗುರುತಿಸುತ್ತೇನೆ." ಎಂದು ನಾನು ಪೋಲಿಸರ ಮುಂದೆ ಹೇಳಿಕೆ ನೀಡಿರುತ್ತೇನೆ ಎಂದರೆ ಸರಿಯಲ್ಲ. ಸದರಿ ಹೇಳಿಕೆಯ ಭಾಗವನ್ನು ನಿಶಾನೆ ಪಿ-18 ಎಂದು ಗುರುತಿಸಲಾಯಿತು. ನಾನು ನಿಪಿ-18 ರಂತೆ ಹೇಳಿಕೆ ನೀಡಿದ್ದರೂ ಸಹ ಆರೋಪಿತರಿಗೆ ಸಹಾಯ ಮಾಡಲು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**<u>ಪಾಟೀ ಸವಾಲುಃ ಆರೋಪಿತರ ಪರ ಶ್ರೀ ಎಂಜಿಪಿ ವಕೀಲರಿಂದಃ</u>**

ಆರೋಪಿತರ ಪರ ವಕೀಲರು ಪಾಟೀ ಸವಾಲು ಇಲ್ಲ ಎಂದು ತಿಳಿಸುತ್ತಾರೆ.

**<u>ಮರುವಿಚಾರಣೆಃ ಇಲ್ಲ</u>**

(ಸಾಕ್ಷಿ ಹೇಳಿದಂತೆ ಹೇಳಿಕೆಯನ್ನು ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಿಸಿ ಓದಿ ಹೇಳಿದ್ದು ಸಾಕ್ಷಿ ಸರಿ ಇರುವುದಾಗಿ ಒಪ್ಪಿರುತ್ತಾರೆ ಎಂದು ದೃಢೀಕರಿಸುತ್ತೇನೆ)

ಓ ಹೇ ಸಾ ಸ ಸಹಿ ಮಾಡಿದ್ದಾರೆ,

(ಕೆ. ಗುರುಪ್ರಸಾದ್)
ಎರಡನೇ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ
ಬೆಂಗಳೂರು ಗ್ರಾಮಾಂತರ ಜಿಲ್ಲೆ, ಬೆಂಗಳೂರು